ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 92 ಗ್ರಾಪಂನ್ಯಾ 2017

Co:-106481

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 17.07.2017

# ಸುತ್ತೋಲೆ

**ವಿಷಯ:** ಪಂಚಾಯತ್ ರಾಜ್ ಸಂಸ್ಥೆಗಳ ನ್ಯಾಯಾಲಯ ಪ್ರಕರಣಗಳನ್ನು ನಿರ್ವಹಿಸಲು ವಕೀಲರುಗಳನ್ನು ನೇಮಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 52 ಗ್ರಾಪಂನ್ಯಾ 2011, ದಿನಾಂಕ 29.10.2011
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 59 ಜಿಪಸ 2017, ದಿನಾಂಕ 06.04.2017

***

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರನ್ವಯ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳು ಮೂರು ಹಂತದ ಸ್ಥಳೀಯ ಸ್ವಾಯತ್ತ ಸಂಸ್ಥೆಗಳಾಗಿ ಕಾರ್ಯ ನಿರ್ವಹಿಸುತ್ತಿವೆ. ಈ ಸಂಸ್ಥೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಆಯಾ ಸಂಸ್ಥೆಗಳ ವಕೀಲರುಗಳು ಹಾಜರಾಗಿ, ಸಮರ್ಥವಾದ ವಾದ ಮಂಡಿಸುವುದು ಆಯಾ ಸ್ಥಳೀಯ ಸಂಸ್ಥೆಗಳ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಉಲ್ಲೇಖಿತ ಸರ್ಕಾರದ ಸುತ್ತೋಲೆ ಮತ್ತು ಆದೇಶಗಳಲ್ಲಿ ವಿವರವಾದ ನಿರ್ದೇಶನಗಳನ್ನು ನೀಡಲಾಗಿರುತ್ತದೆ.

ಆದಾಗ್ಯೂ ಹಲವಾರು ಪ್ರಕರಣಗಳಲ್ಲಿ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳು ತಮ್ಮ ಪರವಾಗಿ ವಕೀಲರುಗಳನ್ನು ನೇಮಿಸಿ, ವಾದ ಮಂಡಿಸಲು ಹಾಜರಾಗದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದರಿಂದಾಗಿ ನ್ಯಾಯಾಲಯಗಳ ಪ್ರಕರಣಗಳಲ್ಲಿ ವಾಸ್ತವಿಕವಾದ ವಿಚಾರಗಳನ್ನು ಘನ ನ್ಯಾಯಾಲಯದ ಗಮನಕ್ಕೆ ತರದೆ ವ್ಯತಿರಿಕ್ತವಾದ ಆದೇಶಗಳಾಗಲು ಅವಕಾಶ ಕಲ್ಪಿಸಿದಂತಾಗುತ್ತದೆ. ಇಂತಹ ಬೆಳವಣಿಗೆಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಆದ್ದರಿಂದ ಇನ್ನು ಮುಂದೆ ಎಲ್ಲಾ ಜಿಲ್ಲಾ ಪಂಚಾಯತಿ, ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿಗಳು ತಮಗೆ ಸಂಬಂಧಿಸಿದ ಪ್ರಕರಣಗಳು ಯಾವುದೇ ನ್ಯಾಯಾಲಯದಲ್ಲಿ ದಾಖಲಾದ ಸಂದರ್ಭಗಳಲ್ಲಿ ಕೂಡಲೇ ಮಾಹಿತಿ ಪಡೆದು, ತಮ್ಮ ಪರವಾಗಿ ವಕೀಲರುಗಳನ್ನು ನೇಮಿಸಿಕೊಂಡು, ಸೂಕ್ತ ಮಾಹಿತಿ/ಪ್ರತಿ ಹೇಳಿಕೆಗಳನ್ನು ದಾಖಲೆಗಳ ಸಮೇತ ಸಮರ್ಥವಾಗಿ ವಾದ ಮಂಡಿಸಲು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳಲು ಕಟ್ಟು ನಿಟ್ಟಿನ ನಿರ್ದೇಶನ ನೀಡಲಾಗಿದೆ. ಈ ಸಂಬಂಧ, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಟ್ಟು ನಿಟ್ಟಿನ ಸೂಚನೆಗಳನ್ನು ನೀಡುವುದು. ಮೇಲಿನ ಸೂಚನೆಗಳನ್ನು ಪಾಲಿಸದಿದ್ದಲ್ಲಿ, ಸಂಬಂಧಪಟ್ಟ ಅಧಿಕಾರಿ/ನೌಕರರುಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.

(ಡಾ॥ ಎನ್.ನಾಗಾಂಬಿಕಾದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
5. ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.
6. ಹೆಚ್ಚುವರಿ ಪ್ರತಿ.